ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ ,
ಕುಂದಾಪುರ

ಸಿ.ಸಿ. ನಂಬ್ರ: 2284/2017

ಚಾಸಾ-5 ಪ್ರಾಸಾ:5

ದಿನಾಂಕ: 17.01.2024

| | | |
|---|---|---|
| ವಾಗ್ಮೂಲದವರ ಹೆಸರು | : | ವಿಶ್ವನಾಥ ಚಂದ್ರ ಶೇಖರ ಶೆಟ್ಟಿ |
| ತಂದೆಯ ಹೆಸರು | : | ಚಂದ್ರಶೇಖರ ಶೆಟ್ಟಿ |
| ವಯಸ್ಸು | : | 49 ವರ್ಷ |
| ಉದ್ಯೋಗ | : | ಹೊಟೇಲ್ ಕೆಲಸ |
| ವಾಸ ಸ್ಥಳ | : | ಹೊಸೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಭಾ. ದಂ. ಪ್ರ, ಸಂ, ಕಲಂ 299 ಸಿ ಆರ್ ಪಿ ಸಿ ರಡಿಯಲ್ಲಿ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಈ ಪ್ರಕರಣದ ಬಗ್ಗೆ ನನಗೇನು ಗೊತ್ತಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ. ಪೊಲೀಸರು ಹೇಳಿದ ಮೇರೆಗೆ ದಾಖಲೆಗೆ ಸಹಿ ಮಾಡಿರುತ್ತೇನೆ. ಸದ್ರಿ ಸಹಿಯನ್ನು ಎಲ್ಲಿ ಯಾವಾಗ ಯಾವ ಕಾರಣಕ್ಕೆ ಮಾಡಿರುತ್ತೇನೆಂದು ಗೊತ್ತಿಲ್ಲ. ಸಾಕ್ಷಿಗೆ ನಿಪಿ-4 ಮತ್ತು 5 ರ ಸ್ಥಳ ಪಂಚನಾಮೆ ಮತ್ತು ನಕಾಶೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-4(ಬಿ) ಮತ್ತು ನಿಪಿ-5(ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 26-10-2013 ರಂದು ಬೆಳಿಗ್ಗೆ 8-45 ಗಂಟೆಗೆ ಕುಂದಾಪುರದ ಮುಖ್ಯ ಪೋಸ್ಟ್ ಆಫೀಸ್ ನಿಂದ ರಾಮ ಮಂದಿರದ ರಸ್ತೆಯಲ್ಲಿ ಚಾಸಾ-1 ರವರು ನಡೆದುಕೊಂಡು ಬರುತ್ತಿದ್ದು, ರಾಮ ಮಂದಿರದ ಕಡೆಯಿಂದ ಇಬ್ಬರು ಮೋಟಾರು ಸೈಕಲಿನಲ್ಲಿ ಬಂದಿದ್ದು,

ಮೋಟಾರು ಸೈಕಲ್ ಸವಾರ ಅವರ ಬಳಿ ಮೋಟಾರು ಸೈಕಲ್ ನಿಲ್ಲಿಸಿದ್ದು, ಮೋಟಾರು ಸೈಕಲ್ ನ ಹಿಂದುಗಡೆ  ಕುಳಿತ ವ್ಯಕ್ತಿ ಇಳಿದು ಮಹಿಳೆಯ ಕುತ್ತಿಗೆಯಲ್ಲಿದ್ದ ಸರವನ್ನು ಬಲತ್ಕಾರವಾಗಿ ಎಳೆದುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ.

ದಿಃ 26-10-2013 ರಂದು ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-4 ರವರ ಸಮಕ್ಷಮ ಬೆಳಿಗ್ಗೆ 11-15 ರಿಂದ 12 ಗಂಟೆಯವರೆಗೆ ನಿಪಿ-4 ಮತ್ತು 5 ರಂತೆ ಸ್ಥಳ ಪಂಚನಾಮೆ ಮತ್ತು ನಕಾಶೆಯನ್ನು ತಯಾರಿಸಿ ಸದ್ರಿ ಪಂಚನಾಮೆಯನ್ನು ನನಗೆ ಓದಿ ತಿಳಿಸಿ ಸ್ಥಳದಲ್ಲಿಯೇ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಈ ಮೇಲೆ ಹೇಳಿದಂತೆ ಪೊಲೀಸರ ಮುಂದೆ ದಿಃ 26-10-2013 ರಂದು ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-8 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಆರೋಪಿಗಳು ತಲೆಮರೆಸಿಕೊಂಡಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ. ದ. ನ್ಯಾ. ದಂ. ಕುಂದಾಪುರ